ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE

# ಜೆಡಿಎಸ್ ತಟಸ್ಥ ಧೋರಣೆ

ಮೇಲ್ಮನೆಯಲ್ಲಿ ನಡೆದ ಗಲಾಟೆಗೆ ಸಂಬಂಧಿಸಿದಂತೆ ಸದನದಲ್ಲಿ ತಟಸ್ಥವಾಗಿರುವ ಜಾಣ ನಡೆಗೆ ಜೆಡಿಎಸ್ ಮುಂದಾಗಿದೆ.

ಡಿ.10ರಂದು ಮೇಲ್ಮನೆಯಲ್ಲಿ ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ವಿರುದ್ಧದ ಅವಿಶ್ವಾಸ ನಿರ್ಣಯ ಮಂಡನೆಗೆ ಸಂಬಂಧಿಸಿದಂತೆ ಉಪಸಭಾಪತಿಗಳನ್ನು ಎಳೆದಾಡಿದ ಪ್ರಸಂಗದಲ್ಲಿ ಸದನದ ಎಲ್ಲಾ ರಾಜಕೀಯ ಪಕ್ಷಗಳ ಸದಸ್ಯರು ಒಂದಲ್ಲ ಒಂದು ರೀತಿಯಲ್ಲಿ ಪರೋಕ್ಷವಾಗಿ ಕಾರಣರಾಗಿರುವ ಹಿನ್ನೆಲೆಯಲ್ಲಿ ಈ ವಿಚಾರವಾಗಿ ಪ್ರತಿಭಟನೆ ಇಲ್ಲವೆ ಪ್ರಸ್ತಾಪ ಮಂಡನೆಯ ಗೋಜಿಗೆ ಹೋಗದೆ ತಟಸ್ಥವಾಗಿ ಉಳಿಯಲು ಜಾತ್ಯತೀತ ಜನತಾದಳ ನಿರ್ಧರಿಸಿದೆ.

ಮೇಲ್ಮನೆ ಸಭಾಪತಿ ಪದಚ್ಯುತಿಗೆ ಸಂಬಂಧಿಸಿದಂತೆ ಬಿಜೆಪಿ ಜೊತೆ ಕೈಜೋಡಿಸಿದ್ದಲ್ಲದೆ, ರಾಜಭವನದ ಮೆಟ್ಟಿಲು ಹತ್ತಿದ್ದ ಜೆಡಿಎಸ್ ಇದೀಗ ಅನಗತ್ಯ ವಾದ–ವಿವಾದಗಳ ತಂಟೆಗೆ ಹೋಗದಿರಲು ತೀರ್ಮಾನಿಸಿದೆ.

ಮೇಲ್ಮನೆಯಲ್ಲಿ ದಿಢೀರಾಗಿ ಚಿಗುರೊಡೆದಿರುವ 'ದೋಸ್ತಿ' ಯನ್ನು ಮುಂದುವರೆಸುವ ಮೂಲಕ ಕಾಂಗ್ರೆಸ್‌ಗೆ ತಿರುಗೇಟು ನೀಡುವುದು ಜೆಡಿಎಸ್‌ನ ಕಾರ್ಯತಂತ್ರವಾಗಿದೆ. ಈ ಕಾರ್ಯತಂತ್ರದ ಭಾಗವಾಗಿ ಮೇಲ್ಮನೆ ಉಪಸಭಾಪತಿ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯನ್ನು ಬೆಂಬಲಿಸಿ ಕಾಂಗ್ರೆಸ್ ಅಭ್ಯರ್ಥಿಗೆ ಸೋಲುಣಿಸಲು ಜೆಡಿಎಸ್ ವರಿಷ್ಠರಾದ ದೇವೇಗೌಡರು ಕಾರ್ಯತಂತ್ರ ರೂಪಿಸಿದ್ದಾರೆನ್ನಲಾಗಿದೆ.



ಮೇಲ್ಮನೆಯ ಉಪಸಭಾಪತಿ ಸ್ಥಾನವನ್ನು ಬಿಜೆಪಿಗೆ ಬಿಟ್ಟುಕೊಟ್ಟು ಸಭಾಪತಿ ಸ್ಥಾನವನ್ನು ತನ್ನದಾಗಿಸಿಕೊಳ್ಳಲು ಎಲ್ಲಾ ಪ್ರಯತ್ನ ನಡೆಸಿದೆ. ಈ ಸಂಬಂಧ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರೊಡನೆ ಮಾತುಕತೆ ನಡೆಸಿದ್ದು ಮಾತುಕತೆ ಫಲಪ್ರದವಾಗಿದೆ ಎಂದು ತಿಳಿದುಬಂದಿದೆ.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರು ರಾಜ್ಯ ಘಟಕದ ಅಧ್ಯಕ್ಷ ನಳಿನ್ ಕುಮಾರ್ ಕಟೀಲು ಅವರೊಡನೆ ಮೇಲ್ಮನೆಯ ಸಭಾಪತಿ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟುಕೊಡುವ ಕುರಿತು ಮಾತನಾಡಿದ್ದಾರೆನ್ನಲಾಗಿದೆ. ಹಾಗಾಗಿ ಮೇಲ್ಮನೆಯ ಸಭಾಪತಿ ಸ್ಥಾನ ಜೆಡಿಎಸ್‌ಗೆ ಒಲಿ ಯುವ ಸಾಧ್ಯತೆಗಳು ನಿಚ್ಚಳವಾಗಿರುವುದರಿಂದ ಈ ಹಿಂದಿನ ಗಲಾಟೆ ಪ್ರಕರಣಕ್ಕೆ ಹೆಚ್ಚಿನ ಮಹತ್ವ ನೀಡದೇ 'ಅದೊಂದು ಅನಪೇಕ್ಷಿತ ಘಟನೆ' ಎಂಬಂತೆ ತೇಪೆ ಸಾರಿಸಿ ಕೈತೊಳೆದುಕೊಳ್ಳಲು ಜೆಡಿಎಸ್ ನಿರ್ಧರಿಸಿದೆ.